**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 952/2015**

| | | |
|---|---|---|
| ಸಾಕ್ಷಿದಾರರ ಹೆಸರು | **ವಡ್ಡಗಲಯ್ಯ** | **ಫ್ರಾಸಾಃ 07** |
| ತಂದೆಯ/ಗಂಡನ ಹೆಸರು | ಕೃಷ್ಣಯ್ಯ | **ಚಾಸಾಃ 06** |
| ವಯಸ್ಸು | 62 ವರ್ಷ | ದಿಃ 04.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. |
| ಕೆಲಸ | ನಿವೃತ್ತ ಎ.ಎಸ್.ಐ | |
| ವಾಸ | ಮೈಸೂರು | |

**ಮುಖ್ಯ ವಿಚಾರಣೆ ಫ್ರಾಜ್ಞ ಸ.ಸ.ಅ ರವರಿಂದಃ**

ನಾನು 2014 ರಿಂದ 2015 ರವರೆಗೆ ಬದನವಾಳು ಪೋಲಿಸ್ ಠಾಣೆಯಲ್ಲಿ ಮುಖ್ಯಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 19.05.2014 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಹೊಂದಿಕೊಂಡು ಠಾಣಾ ಮೆಕದ್ದಮೆ ಸಂಖ್ಯೆ 116/2014 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವ ವನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯ ಮತ್ತು ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ಈ ಪ್ರಕರಣದ ಕಡತವನ್ನು ಚಾಸಾ 7 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ದೂರಿನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ.ಪಿ. 1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ. 1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರ.ವ.ವ ದಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ. 6 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ. 6(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ದೂರನ್ನು ಚಾಸಾ 1 ರವರೇ ಬರೆದು ತಂದಿದ್ದರು. ದೂರನ್ನು ದಾಖಲಿಸುವ ಮೊದಲು ಪ್ರಕರಣದ ಬಗ್ಗೆ ವಿಚಾರಿಸಿ ದೂರನ್ನು ಪಡೆದಿರುತ್ತೇನೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಕೃತ್ಯ ಸ್ಥಳಕ್ಕೆ ಹೋಗಿಲ್ಲ. ಠಾಣಾ ಅಂಕಿಅಂಶಗಳಿಗಾಗಿ ನಿ.ಪಿ. 1 ಅನ್ನು ನಾನೇ ಹೇಳಿ ಬರೆಸಿದ್ದೇನೆ ಎಂದರೆ

ಸರಿಯಲ್ಲ. ಈ ಪ್ರಕರಣಕ್ಕೂ ಹಾಗೂ ಆರೋಪಿಗಳಿಗೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ಅವರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ.ಹೇ.ಕೇ.ಸ.ಇದೆ.ಎಂ.ಒ**

1 **ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ನ್ಯಾಯಾಲಯ, ನಂಜನಗೂಡು**